# ಕನ್ನಡ ಪೋಸ್ಟ್

KANNADA POST | ಇದು ಸುದ್ದಿ ವಿಲಾಸ | ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 03 | Pages. 2 | Date: 26-11-2025, WEDNESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 03 - ಪುಟಗಳು : 2 | 26-11-2025 ಬುಧವಾರ | Ph: 8762954248 | ದರ : ₹1


## ಗೋ ಪೂಜೆಯಿಂದ ಮನುಕುಲಕ್ಕೆ ಪುಣ್ಯ ಪ್ರಾಪ್ತಿ

### ಆದಿಚುಂಚನಗಿರಿ ಶ್ರೀ ಅಭಿಮತ | ಕುಂದೂರು ಜಾತ್ರಾ ಮಹೋತ್ಸವಕ್ಕೆ ಚಾಲನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಗೋವುಗಳಿಗೆ ಪೂಜೆ ಸಲ್ಲಿಸಿದರೆ ಮುಕ್ಕೋಟಿ ದೇವತೆಗಳ ದರ್ಶನ ಪಡೆದಷ್ಟೇ ಪುಣ್ಯ ಸಿಗಲಿದೆ ಎಂದು ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದರು.

ತಾಲೂಕಿನ ಪುರಾಣ ಪ್ರಸಿದ್ಧ ಶ್ರೀ ಕ್ಷೇತ್ರ ಕುಂದೂರು ಮಠದಲ್ಲಿ ಮಂಗಳವಾರ ಬೆಳಿಗ್ಗೆ ಧ್ವಜಾರೋಹಣ ನೆರವೇರಿಸುವ ಮೂಲಕ ಶ್ರೀ ಸುಬ್ರಹ್ಮಣ್ಯಸ್ವಾಮಿ ಹಾಗೂ ಶ್ರೀ ರಂಗನಾಥಸ್ವಾಮಿ ಜಾತ್ರಾ ಮಹೋತ್ಸವಕ್ಕೆ ಚಾಲನೆ ನೀಡಿ, ಬಳಿಕ ಗೋಪೂಜೆ ನೆರವೇರಿಸಿ ಆಶೀರ್ವಚನ ನೀಡಿದರು.

ಇತ್ತೀಚಿನ ದಿನಗಳಲ್ಲಿ ಆಧುನಿಕರಣ ಹೆಚ್ಚಿದಂತೆಲ್ಲ ಗೋವುಗಳ ಸಂಖ್ಯೆ ಕ್ಷೀಣಿಸುತ್ತಿದೆ. ಮನೆಯಲ್ಲಿ ಗೋವುಗಳನ್ನು ಸಾಕಿ ಸಲುಹಿದರೆ ಗೃಹದಲ್ಲಿ ಲಕ್ಷ್ಮಿ ನೆಲೆಸಲಿದ್ದು ಬದುಕು ಶಾಂತಿ ಹಾಗೂ ನೆಮ್ಮದಿಯ ಗೂಡಾಗಲಿದೆ ಎಂದು ತಿಳಿಸಿದರು.

ಚುಂಚಶ್ರೀಗಳಿಗೆ ಪಾದ ಪೂಜೆ: ಶ್ರೀ ಕ್ಷೇತ್ರಕ್ಕೆ ಆಗಮಿಸಿದ ಚುಂಚಶ್ರೀ ಅವರನ್ನು ಮಂಗಳವಾದ್ಯದೊಂದಿಗೆ ಸ್ವಾಗತಿಸಿದ ಭಕ್ತರು ಪಾದಪೂಜೆ ನೆರವೇರಿಸಿದರು.



ಶ್ರೀ ಸುಬ್ರಹ್ಮಣ್ಯ ಸ್ವಾಮಿ ದೇಗುಲದ ಬಳಿ ಗೋಪೂಜೆ ನೆರವೇರಿಸಿ ದೇವರಿಗೆ ಪೂಜೆ ಸಲ್ಲಿಸಿದರು.

ಶ್ರೀ ರಂಗನಾಥಸ್ವಾಮಿ, ಶ್ರೀ ವಿಶ್ವನಾಥಸ್ವಾಮಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದರು. ದೇಗುಲದ ಮುಂಭಾಗದಲ್ಲಿ ರಥಕ್ಕೆ ನವಕಲಶಾರೋಹಣ ನೆರವೇರಿಸಿದರು.

ಶ್ರೀ ಕ್ಷೇತ್ರದ ಪ್ರಧಾನ ದೇವತೆ ಮೆಳೆಯಮ್ಮ, ರಂಗನಾಥಸ್ವಾಮಿ, ಸತ್ಯನಾರಾಯಣ ಸ್ವಾಮಿ, ಲಕ್ಷ್ಮೀದೇವಿ, ವಿಶ್ವನಾಥ, ಪಾರ್ವತಿ ಅಮ್ಮ, ಸುಬ್ರಹ್ಮಣ್ಯಸ್ವಾಮಿ ಹಾಗೂ ಪರಿವಾರ ದೇವರುಗಳು ಮತ್ತು ಕ್ಷೇತ್ರದ ಹಿಂದಿನ ಪೀಠಾಧಿಪತಿಗಳ ಸ್ಮರಣೆಯೊಂದಿಗೆ ಧಾರ್ಮಿಕ ವಿಧಿ ವಿಧಾನಗಳು ನೆರವೇರಿದವು.

ಆದಿಶಕ್ತಿ ಮೆಳೆಯಮ್ಮ ದೇವಿಗೆ ಶ್ರೀಗಳು ಪೂಜೆ ಸಲ್ಲಿಸಿ ದೇವಿಯ ಸನ್ನಿಧಾನದಲ್ಲಿ ಶ್ರೀ ಗಣಪತಿ ಹೋಮ, ವಾಸ್ತು ಹೋಮ, ಮೃತ್ಯುಂಜಯ ಹೋಮ, ದುರ್ಗಾ ಹೋಮ, ಪೂರ್ಣಾಹುತಿ ಮಹಾಮಂಗಳಾರತಿ ನೆರವೇರಿಸಿದರು. ಶ್ರೀಗಳ ದಿವ್ಯ ಸಾನಿಧ್ಯದಲ್ಲಿ ಸುಮಂಗಲಿಯರು ಲಲಿತ ಸಹಸ್ರನಾಮ, ಲಲಿತ ತ್ರಿಶತಿ, ಪಠಿಸಿ ಸಾಮೂಹಿಕ ಕುಂಕುಮಾರ್ಚನೆ ನೆರವೇರಿಸಿದರು.

### ಇಂದಿನ ಕಾರ್ಯಕ್ರಮಗಳು

ನ.26 ರಂದು ಶ್ರೀ ಕ್ಷೇತ್ರದಲ್ಲಿ ಸಂಜೆ 4.30 ಗಂಟೆಗೆ ಶ್ರೀ ಸುಬ್ರಹ್ಮಣ್ಯ ಸ್ವಾಮಿಯ ರಥೋತ್ಸವ ಹಾಗೂ ಸರ್ಪವಾಹನೋತ್ಸವ ಜರುಗಲಿದೆ. ಉಪವಾಸ ವ್ರತ ಆಚರಿಸುವ ಸುತ್ತಲಿನ ಗ್ರಾಮಸ್ಥರು ಕ್ಷೇತ್ರಕ್ಕೆ ಆಗಮಿಸಿ ಪೂಜೆ ಸಲ್ಲಿಸುವರು. ಅದೇ ದಿನ ಸಂಜೆ 6.30ಕ್ಕೆ ಆಯೋಜಿಸಿರುವ ಧಾರ್ಮಿಕ ಸಮಾರಂಭದಲ್ಲಿ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ನ.27 ರಂದು ಶ್ರೀ ರಂಗನಾಥಸ್ವಾಮಿಯ ರಥೋತ್ಸವ ಮತ್ತು ಗರುಡೋತ್ಸವ ನಡೆಯಲಿದೆ. ಮೂರು ದಿನ ನಿತ್ಯಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗಿದೆ. ನ.28 ರಂದು ಕ್ಷೇತ್ರದ ಹಿಂದಿನ ಪೀಠಾಧ್ಯಕ್ಷರು ಪುಣ್ಯಾರಾಧನೆ ಹಾಗೂ ಗುರು ಸಂಸ್ಮರಣೋತ್ಸವ ನೆರವೇರಲಿದೆ.



ಆದಿಚುಂಚನಗಿರಿ ಹಾಸನ ಶಾಖಾ ಮಠದ ಶಂಭುನಾಥ ಸ್ವಾಮೀಜಿ, ಮೈಸೂರು ಶಾಖಾ ಮಠದ ಸೋಮೇಶ್ವರನಾಥ ಸ್ವಾಮೀಜಿ, ಬೆಂಗಳೂರಿನ ಹುಳಿಮಾವು ಶಾಖಾ ಮಠದ ಶ್ರೀಶೈಲನಾಥ ಸ್ವಾಮೀಜಿ ಹಾಗೂ ಸುತ್ತಮುತ್ತಲ ಗ್ರಾಮಸ್ಥರು ಪಾಲ್ಗೊಂಡಿದ್ದರು.

## ಮಕ್ಕಳ ಪ್ರತಿಭೆ ಗುರುತಿಸಿ ವೇದಿಕೆ ಕಲ್ಪಿಸಿ: ಸಿಮೆಂಟ್ ಮಂಜು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸಲು ಪ್ರತಿಭಾ ಕಾರಂಜಿ ವೇದಿಕೆ ಸಹಕಾರಿಯಾಗಿದೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲೂಕಿನ ಪಾಳ್ಯ ಹೋಬಳಿ ಚಿಕ್ಕಕಣಗಾಲು ಗ್ರಾಮದ ಸರ್ಕಾರಿ ಪ್ರೌಢ ಶಾಲೆ ಆವರಣದಲ್ಲಿ ಕ್ಲಸ್ಟರ್ ಮಟ್ಟದ ಪ್ರೌಢಶಾಲಾ ವಿಭಾಗದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪ್ರತಿ ಮಗುವಿನಲ್ಲೂ ಪ್ರತಿಭೆ ಇರುತ್ತದೆ. ಆ ಪ್ರತಿಭೆ ಗುರುತಿಸಿ ಹೊರತರಲು ಇಂತಹ ವೇದಿಕೆಗಳು ಸಹಕಾರಿ ಎಂದರು.

ಪಠ್ಯ ಮತ್ತು ಪಠ್ಯೇತರ ಚಟುವಟಿಕೆಯಲ್ಲಿ ಮಕ್ಕಳು ಹೆಚ್ಚು ಭಾಗವಹಿಸಬೇಕು. ಪ್ರೌಢ ಶಾಲೆಯ ಹಂತ ಶಿಕ್ಷಣಕ್ಕೆ ತಳಪಾಯ. ಇಲ್ಲಿ ಗಟ್ಟಿಯಾಗಿ ನಿಂತರೆ ಮುಂದೆ ಗಟ್ಟಿಯಾಗಿ ನಿಲ್ಲುವುದಕ್ಕೆ ಸಾಧ್ಯ. ಈ ಹಂತದಲ್ಲಿರುವಾಗಲೇ ಮಕ್ಕಳಿಗೆ ಉತ್ತಮ ಶಿಕ್ಷಣದೊಂದಿಗೆ ಸಂಸ್ಕಾರ ಕಲಿಸಬೇಕು. ವಿದ್ಯಾರ್ಥಿಗಳು ಉತ್ತಮ ಶಿಕ್ಷಣದೊಂದಿಗೆ ತಮ್ಮ ಭವಿಷ್ಯ ರೂಪಿಸಿಕೊಳ್ಳಬೇಕು. ಮಕ್ಕಳಿಗಾಗಿ ಸಂಪತ್ತು ಸಂಗ್ರಹಿಸುವ ಬದಲು ಪೋಷಕರು ತಮ್ಮ ಮಕ್ಕಳಿಗೆ ಸಂಸ್ಕಾರಭರಿತ ಶಿಕ್ಷಣ ನೀಡಿ ಮಕ್ಕಳನ್ನೇ ರಾಷ್ಟ್ರದ ಅಮೂಲ್ಯ ಆಸ್ತಿಯನ್ನಾಗಿಸಬೇಕು. ಚಿಕ್ಕಕಣಗಾಲು ಸರ್ಕಾರಿ ಪ್ರೌಢಶಾಲೆಗೆ ನೂತನ ರಂಗ ಮಂದಿರ ನಿರ್ಮಾಣ ಮಾಡಲು ಅನುದಾನ ಮಿಸಲಿಡುವುದಾಗಿ ಭರವಸೆ ನೀಡಿದರು.

ಶಾಲೆಯ ಪ್ರಭಾರ ಮುಖ್ಯ ಶಿಕ್ಷಕ ರಘು ಮಾತನಾಡಿ, ಮಕ್ಕಳು ಮನೆಯ ನಂದಾದೀಪವಿದ್ದಂತೆ. ಭವಿಷ್ಯದ ಆಶಾ ಜ್ಯೋತಿಗಳು. ಅವರ ಬುದ್ಧಿ ಚುರುಕುಗೊಳಿಸಿ ಸದೃಢರನ್ನಾಗಿಸುವ ಗುಣಮಟ್ಟದ ಶಿಕ್ಷಣ ಜೊತೆಗೆ ಅವರಿಗೆ ಸಾಂಸ್ಕೃತಿಕ ಚುಟುವಟಿಕೆಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿ ಕೊಡುವುದು ಅತ್ಯಗತ್ಯ ಎಂದರು.



2025-26ನೇ ಸಾಲಿನ ಪಾಳ್ಯ ಹೋಬಳಿ, ಕ್ಲಸ್ಟರ್ ಮಟ್ಟದ ಪ್ರೌಢ ಶಾಲಾ ವಿಭಾಗದ ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ಚಿಕ್ಕಕಣಗಾಲು, ಕಣತೂರು, ಮಡಬಲು, ಕಾಮತಿ ಕೂಡಿಗೆ, ಬೆಟ್ಟಳ್ಳಿ ಕ್ರಾಸ್, ನೀಲಲೋಚನಾ ಪಾಳ್ಯ, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ, ಸೆಂಟ್ ಜೋಸೆಫ್ ಪ್ರೌಢ ಶಾಲೆ, ಕಿರಣ್ ಕಾನ್ವೆಂಟ್ ಕಣತೂರು ಶಾಲಾ ತಂಡಗಳು ಭಾಗವಹಿಸಿದ್ದವು.

ಶಾಸಕ ಸಿಮೆಂಟ್ ಮಂಜು, ಎಸ್‌ಡಿಎಂಸಿ ಅಧ್ಯಕ್ಷ ಕೃಷ್ಣಮೂರ್ತಿ, ಮಾಜಿ ಅಧ್ಯಕ್ಷ ಪರಮೇಶ್ವರಪ್ಪ, ಡೈರಿ ಅಧ್ಯಕ್ಷ ರವಿಪ್ರಕಾಶ್ ಅವರನ್ನು ಸನ್ಮಾನಿಸಲಾಯಿತು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಶಾಸಕರು ಪ್ರಶಸ್ತಿ ಪತ್ರ ವಿತರಣೆ ಮಾಡಿದರು.

ಎಸ್‌ಡಿಎಂಸಿ ಸದಸ್ಯರಾದ ಮಹೇಶ್ವರಯ್ಯ, ಆನಂದ್, ಗಂಗಾಧರ್, ಸ್ವಾಮಿ, ಲತಾ, ಸುಜಾತಾ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಂಜುನಾಥ್, ರವಿ, ನೇತ್ರಾ ರಾಜಶೇಖರ್ ಇತರರಿದ್ದರು.

## ಪುರ ಗ್ರಾಮದ ಕೆರೆ ದಿಡಗ ಗ್ರಾಪಂಗೆ ಹಸ್ತಾಂತರ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಸಾಮಾಜಿಕ ಸೇವೆಗಳಲ್ಲಿ ಕೆರೆ ಹೂಳೆತ್ತುವ ಯೋಜನೆಯು ಯಶಸ್ವಿ ಕಾರ್ಯಕ್ರಮವಾಗಿದೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಪುರ ಗ್ರಾಮದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ನಮ್ಮ ಊರು ನಮ್ಮ ಕೆರೆ ಯೋಜನೆಯಡಿ ಹೂಳೆತ್ತಲಾಗಿದ್ದ 900ನೇ ಕೆರೆಯನ್ನು ಗ್ರಾಮ ಪಂಚಾಯಿತಿಗೆ ಹಸ್ತಾಂತರ ಕಾರ್ಯಕ್ರಮದಲ್ಲಿ ಮಾತನಾಡಿ, ಡಾ. ಡಿ.ವೀರೇಂದ್ರ ಹೆಗ್ಗಡೆ ಅವರ ಈ ಒಂದು ಸಮಾಜಮುಖಿ ಕಾರ್ಯಕ್ರಮವು ಸಮಾಜಕ್ಕೆ ಮಾದರಿಯಾಗಿದೆ ಎಂದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕ ಸತೀಶ್ ಸುವರ್ಣ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಹಮ್ಮಿಕೊಂಡಿರುವ ಸಾಮಾಜಿಕ ಕಳಕಳಿಯ ಕಾರ್ಯಗಳಲ್ಲಿ ಒಂದು ಗ್ರಾಮೀಣ ಮಟ್ಟದ ಊರ ಕೆರೆಯನ್ನು ಹೂಳೆತ್ತಿ ಪುನರ್ಜನ್ಮ ನೀಡಿ ಆ ಊರಿನ ಜಲ ಪೂರಣವನ್ನು ಹೆಚ್ಚಿಸಿ ಜನ ಜಾನುವಾರುಗಳಿಗೆ ಅನುಕೂಲವಾಗುವಂತೆ ಮಾಡುತ್ತಿರುವ ಈ ಕಾಯಕಕ್ಕೆ ಧರ್ಮಸ್ಥಳ ಶ್ರೀಗಳು ಪ್ರೋತ್ಸಾಹ ನೀಡುತ್ತಿದ್ದು ಅದರಿಂದಾಗಿ ಗ್ರಾಮ ಮಟ್ಟದ ಇಂತಹ ಕೆರೆಯು ಅಭಿವೃದ್ಧಿ ಕಾಣಲು ಸಾಧ್ಯ ಆಗಿದೆ ಎಂದರು.

ನಂತರ ಕೆರೆಯ ನಾಮಫಲಕ ಅನಾವರಣಗೊಳಿಸಿ ಸ್ಥಳೀಯ ಗ್ರಾಮ ಪಂಚಾಯಿತಿಗೆ ಹಸ್ತಾಂತರ ಪತ್ರ ನೀಡಲಾಯಿತು. ಧರ್ಮಸ್ಥಳ ಶ್ರೀಗಳ 78ನೇ ವರ್ಷದ ಹುಟ್ಟುಹಬ್ಬದ ಪ್ರಯುಕ್ತ ಶ್ರೀ ವೀರಭದ್ರೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕೆ.ಎಸ್.ಪ್ರಕಾಶ್, ಕೆರೆ ಅಭಿವೃದ್ಧಿ ಸಮಿತಿ ಅಧ್ಯಕ್ಷ ಚಂದ್ರು, ಜಿಲ್ಲಾ ಜಾಗೃತಿ ವೇದಿಕೆ ಸದಸ್ಯ ಮಲ್ಲೇಗೌಡ, ಜಿಲ್ಲಾ ಜನ ಜಾಗೃತಿ ವೇದಿಕೆ ನಿಕಟಪೂರ್ವ ಅಧ್ಯಕ್ಷ ತೋಟಿ ಜಯರಾಮ್, ತಾಲೂಕು ಯೋಜನಾಧಿಕಾರಿ ಶಾಲಿನಿ, ಪುರ ಕೆರೆ ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಶಿವಶಂಕರ್, ವಲಯ ಮೇಲ್ವಿಚಾರಕ ಹರೀಶ್ ಇತರರಿದ್ದರು.

## ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಹೋರಾಟ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ರಾಜ್ಯದಲ್ಲಿ ರೈತರ ಸಮಸ್ಯೆಗಳನ್ನು ಬಗೆಹರಿಸದ, ಅತಿವೃಷ್ಟಿಯಿಂದ ಆಗಿರುವ ಬೆಳೆ ನಷ್ಟಕ್ಕೆ ಸೂಕ್ತ ಪರಿಹಾರ ನೀಡದ ರಾಜ್ಯ ಸರ್ಕಾರದ ನಡೆ ಖಂಡಿಸಿ ಬಿಜೆಪಿ ವತಿಯಿಂದ ಜಿಲ್ಲೆ ಹಾಗೂ ರಾಜ್ಯದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗುತ್ತಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಮಂಗಳವಾರ ಮಾತನಾಡಿ, ಜನಪರ ನೋಟ-ರೈತಪರ ಹೋರಾಟ ಹೆಸರಿನಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗುತ್ತಿದೆ. ಕಬ್ಬಿಗೆ ಬೆಂಬಲ ಬೆಲೆಗೆ ಆಗ್ರಹಿಸಿ ರೈತರು ಹೋರಾಟ ಮಾಡಿದರು. ಈಗ ಮೆಕ್ಕೆಜೋಳಕ್ಕೆ ಬೆಂಬಲ ಬೆಲೆ ನೀಡಲು ಹೋರಾಟಕ್ಕೆ ರೈತರು ಸಜ್ಜಾಗುತ್ತಿದ್ದಾರೆ. ಒಟ್ಟಿನಲ್ಲಿ ಒಂದಲ್ಲ ಒಂದು ರೀತಿಯಲ್ಲಿ ರೈತರು ಸಮಸ್ಯೆ ಎದುರಿಸುತ್ತಿದ್ದಾರೆ. ಅದಕ್ಕೆ ಕಾರಣವಾಗಿರುವ ರಾಜ್ಯ ಸರ್ಕಾರದ ವಿರುದ್ಧ 2 ಹಂತಗಳಲ್ಲಿ ಬಿಜೆಪಿ ಹೋರಾಟ ಹಮ್ಮಿಕೊಳ್ಳಲು ನಿರ್ಧರಿಸಿದೆ ಎಂದರು.

ನ.27 ಮತ್ತು 28 ರಂದು ಎಲ್ಲ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಹೋರಾಟ ಹಮ್ಮಿಕೊಳ್ಳಲಾಗುತ್ತಿದೆ. ಡಿ. 2 ರಂದು ಜಿಲ್ಲಾ ಕೇಂದ್ರದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಅದಕ್ಕೆ ರೈತ ಸಂಘಟನೆಗಳಿಗೂ ಆಹ್ವಾನ ನೀಡಲಾಗಿದೆ ಎಂದು ತಿಳಿಸಿದರು.

ಡಿ. 8 ರಂದು ಬೆಳಗಾವಿ ಚಳಿಗಾಲದ ಅಧಿವೇಶನಕ್ಕೂ ಮುನ್ನ ರೈತಪರವಾದ ಹೋರಾಟ ಹಮ್ಮಿಕೊಳ್ಳಲಾಗಿದೆ. ವಿವಿಧ ಬೆಳೆಗಳಿಗೆ ಬೆಂಬಲ ಬೆಲೆ ಜೊತೆಗೆ ರೈತರ ಸಮಸ್ಯೆ ಬಗೆಹರಿಸುವುದು ನಮ್ಮ ಉದ್ದೇಶ ಎಂದರು.

ಆಲೂರು-ಸಕಲೇಶಪುರ ಶಾಸಕ ಸಿಮೆಂಟ್ ಮಂಜು ಮಾತನಾಡಿ, ಅತಿಹೆಚ್ಚು ಮಳೆ ಬಂದು ಬೆಳೆ ಜೊತೆಗೆ ಆಸ್ತಿಪಾಸ್ತಿ ನಷ್ಟವಾಗಿವೆ. ಇದರಿಂದ ಅನ್ನದಾತ ಸಂಕಷ್ಟಕ್ಕೆ ಸಿಲುಕಿದ್ದಾನೆ. ಆದರೂ ರಾಜ್ಯ ಸರ್ಕಾರ ಸೂಕ್ತ ಪರಿಹಾರ ನೀಡಿಲ್ಲ ಎಂದು ಆರೋಪಿಸಿದರು.

ರೈತರನ್ನು ಸರ್ಕಾರ ಸಂಪೂರ್ಣ ಕಡೆಗಣಿಸಿದೆ. ಹಾಲು ಉತ್ಪಾದಕರಿಗೆ 620 ಕೋಟಿ ಬಾಕಿ ಬಿಡುಗಡೆಗೆ ಇನ್ನೂ ಮೀನ ಮೇಷ ಎಣಿಸುತ್ತಿದೆ ಎಂದು ಆರೋಪಿಸಿದರು.

ಹಲವು ಬೆಳೆಗಳಿಗೆ ಬೆಂಬಲ ಬೆಲೆ ನೀಡಲು ಸತಾಯಿಸಲಾಗುತ್ತಿದೆ. ಕೇಂದ್ರ ಸರ್ಕಾರ ಪಿಎಂ

ಕಿಸಾನ್ ಯೋಜನೆಯಡಿ ರೈತರಿಗೆ ಅನುಕೂಲ ಮಾಡುತ್ತಿದ್ದರೆ, ಈ ಸರ್ಕಾರ ಆರ್ಥಿಕ ಸಹಾಯ ಮಾಡುವುದನ್ನೇ ನಿಲ್ಲಿಸಿದೆ ಎಂದು ದೂರಿದರು.

ಸುದ್ದಿಗೋಷ್ಟಿಯಲ್ಲಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಅಮಿತ್ ಶೆಟ್ಟಿ, ಗಿರೀಶ್ ನಂಬಿಹಳ್ಳಿ, ಜಿಲ್ಲಾ ರೈತಮೋರ್ಚಾ ಅಧ್ಯಕ್ಷ ನಾರಾಯಣಗೌಡ, ಮಾಧ್ಯಮ ಸಂಯೋಜಕ ನಾಗೇಶ್ ಇದ್ದರು.

## ಇಂದು ಪ್ರಸನ್ನ ಸುಬ್ರಹ್ಮಣ್ಯ ಸ್ವಾಮಿ ರಥೋತ್ಸವ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ರಾಮನಾಥಪುರದ ಐತಿಹಾಸಿಕ ಶ್ರೀ ಪ್ರಸನ್ನ ಸುಬ್ರಹ್ಮಣ್ಯಸ್ವಾಮಿ ದೇವಸ್ಥಾನದ ಮಹಾ ರಥೋತ್ಸವ ನ. 26ರ ಬುಧವಾರ ನೆರವೇರಲಿದ್ದು ಜಾತ್ರೆಯ ಸಡಗರ ಮೇಳೈಸಿದೆ.

ಸುಕ್ಷೇತ್ರದಲ್ಲಿ ಒಂದು ತಿಂಗಳ ಕಾಲ ನಡೆಯುವ ಜಾತ್ರಾ ಮಹೋತ್ಸವದಲ್ಲಿ ಸಹಸ್ರಾರು ಭಕ್ತರು ಪಾಲ್ಗೊಳ್ಳುತ್ತಾರೆ. ಮೈಸೂರು ಸೀಮೆ ಭಾಗದಲ್ಲಿ ನಡೆಯುವ ಮೊದಲ ಜಾತ್ರಾ ಮಹೋತ್ಸವ ಎಂಬ ಪ್ರಸಿದ್ಧಿಗೆ ಪಾತ್ರವಾಗಿರುವ ರಾಮನಾಥಪುರ ಶ್ರೀ ಸುಬ್ರಹ್ಮಣ್ಯಸ್ವಾಮಿ ರಥೋತ್ಸವ ಯಶಸ್ವಿಗೆ ದೇವಸ್ಥಾನ ಆಡಳಿತ ಮಂಡಳಿ ಹಾಗು ಗ್ರಾಮ ಪಂಚಾಯಿತಿ ಸಕಲ ಸಿದ್ಧತೆ ಮಾಡಿಕೊಂಡಿವೆ.





ಮಹಾ ರಥೋತ್ಸವ ನಂತರ ಮಾರ್ಗಶಿರ ಮಾಸದಲ್ಲಿ ಒಂದು ತಿಂಗಳ ಕಾಲ ನಡೆಯುವ ಷಷ್ಠಿ ಜಾತ್ರೆಗೆ ಶ್ರೀ ಕ್ಷೇತ್ರ ಸಜ್ಜುಗೊಂಡಿದೆ.

ದೇವಸ್ಥಾನದಲ್ಲಿ ಈಗಾಗಲೇ ವಿಧ ಧಾರ್ಮಿಕ ಕಾರ್ಯಕ್ರಮಗಳಿಗೆ ಚಾಲನೆ ದೊರೆತಿದೆ. ಯಾಗಶಾಲಾ ಪ್ರವೇಶ, ಅಂಕುರಾರ್ಪಣ, ಮಯೂರ ವಾಹನೋತ್ಸವ, ಅಶ್ವ ವಾಹನೋತ್ಸವ, ಶೇಷ ವಾಹನೋತ್ಸವ, ಪಂಚಮಿ ಉತ್ಸವ, ಬೆಳ್ಳಿ ಪಲ್ಲಕ್ಕಿ ಉತ್ಸವ ನೆರವೇರಿಸಲಾಗಿದೆ. ಶನಿವಾರ ನಡೆಯುವ ಮಹಾ ರಥೋತ್ಸವಕ್ಕೆ 35 ಅಡಿ ಎತ್ತರದ ರಥ ಸಿಂಗಾರಗೊಳ್ಳುತ್ತಿದೆ. ಬೆಳಿಗ್ಗೆ ಪೂಜಾ ವಿಧಾನಗಳನ್ನು ಪೂರೈಸಿದ ಬಳಿಕ ಅಲಂಕೃತ ರಥದ ಮೇಲೆ ದೇವರ ಉತ್ಸವ ಮೂರ್ತಿ ಪ್ರತಿಷ್ಠಾಪಿಸಿ ಭಕ್ತರ ಸಂಭ್ರಮದ ನಡುವೆ ಮಧ್ಯಾಹ್ನ 12 ಗಂಟೆಗೆ ಅಭಿಜಿನ್ ಮುಹೂರ್ತದಲ್ಲಿ ಭಕ್ತರು ತೇರು ಎಳೆಯಲಿದ್ದಾರೆ.

ಮಹಾ ರಥೋತ್ಸವ ಜರುಗಿದ ದಿನದಿಂದ ಒಂದು ತಿಂಗಳವರೆಗೂ ಜಾತ್ರೆ ನಡೆಯುತ್ತದೆ. ನಂತರ ಡಿ. 26ರಂದು ಆತಿಂಗಳ ಷಷ್ಟಿಟಿ ತೇರು ಹರಿಯುತ್ತದೆ. ಏಪ್ರಿಲ್ ಮೇ ತಿಂಗಳ ವೈಶಾಖ ಮಾಸದಲ್ಲಿ ಇಂದ್ರಾಕ್ಷಮ ವಿಗ್ರಹದ ರಥೋತ್ಸ ವ ಇರುತ್ತದೆ. ಈ ಕ್ಷೇತ್ರದಲ್ಲಿ ಮಾಘ ಬಹುಳ ಮಹಾಶಿವರಾತ್ರಿ ಮರುದಿನ ಅಗಸ್ತ್ಯೇಶ್ವರ, ವೈಶಾಖ ಶುದ್ಧ ಮೃಗಶಿರ ನಕ್ಷತ್ರದಲ್ಲಿ ಪಟ್ಟಾಭಿರಾಮ ಮತ್ತು ವೈಶಾಖ ಶುದ್ಧ ಚತುರ್ದಶಿ ನರಸಿಂಹ ಜಯಂತಿಯನ್ನು ಆಚರಿಸಲಾಗುತ್ತದೆ.

ರಥೋತ್ಸವದ ಜಾತ್ರಾ ಸಮಯದಲ್ಲಿ ಸಹಸ್ರಾರು ಭಕ್ತರು ಕಾವೇರಿ ನದಿಯಲ್ಲಿ ಮಿಂದು ದೇವಸ್ಥಾನದ ಪೂಜಾ ಕಾರ್ಯಗಳಲ್ಲಿ ಭಾಗಿಯಾಗುತ್ತಾರೆ. ತಿಂಗಳ ತೇರು ಕಳೆದರೂ ಜಾತ್ರೆಯ ಸಡಗರ ಕ್ಷೀಣಿಸುವುದಿಲ್ಲ.

## ಲೋಕ ಅದಾಲತ್‌ನಿಂದ ಶೀಘ್ರ ನ್ಯಾಯದಾನ ಲಭ್ಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಲೋಕ ಅದಾಲತ್‌ನಿಂದ ಶೀಘ್ರ ನ್ಯಾಯದಾನ ಲಭ್ಯವಾಗಲಿದ್ದು ಉಭಯ ಪಕ್ಷಗಾರರ ನಡುವೆ ಬಾಂಧವ್ಯ ವೃದ್ಧಿಯಾಗುವುದು ಮತ್ತು ಸಮಯ, ಹಣ ಉಳಿತಾಯವಾಗಲಿದೆ ಎಂದು ಪ್ರಧಾನ ಜಿಲ್ಲಾ ನ್ಯಾಯಾಧೀಶೆ ಹೇಮಾವತಿ ತಿಳಿಸಿದರು.

ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ಮಂಗಳವಾರ ಮಾತನಾಡಿದ ಅವರು, ಡಿ. 13ರ ಎರಡನೇ ಶನಿವಾರ ದೇಶದಾದ್ಯಂತ ರಾಷ್ಟ್ರೀಯ ಲೋಕ ಅದಾಲತ್ ನಡೆಸಲಾಗುತ್ತಿದ್ದು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಜಿಲ್ಲೆ ಹಾಗೂ ತಾಲೂಕುಗಳ ಎಲ್ಲಾ ನ್ಯಾಯಾಲಯಗಳಲ್ಲೂ ಏಕ ಕಾಲಕ್ಕೆ ಜನತಾ ನ್ಯಾಯಾಲಯ ಹಮ್ಮಿಕೊಳ್ಳಲಾಗಿದೆ ಎಂದರು.

ಸಂಧಾನದ ಮೂಲಕ ರಾಜಿ ಮಾಡಿಕೊಳ್ಳುವ ಉಭಯ ಪಕ್ಷಗಾರರು ಖುದ್ದಾಗಿ ಅಥವಾ ವಕೀಲರ ಮೂಲಕ ಸಂಧಾನ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿದೆ.



ಲೋಕ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಉಳಿದಿರುವ ಸಿವಿಲ್ ಪ್ರಕರಣ, ಬಗೆಹರಿಸಬಹುದಾದ ಕ್ರಿಮಿನಲ್ ಪ್ರಕರಣ, ಮೋಟಾರು ವಾಹನ ಅಪಘಾತ ಪರಿಹಾರ ಪ್ರಕರಣ, ಭೂ ಸ್ವಾಧೀನ ಪ್ರಕರಣ, ಚೆಕ್ ಅಮಾನ್ಯ, ಜನನ ನೋಂದಣಿ, ಕೌಟುಂಬಿಕ, ಜೀವನಾಂಶ, ಲಘು ಕ್ರಿಮಿನಲ್ ಪ್ರಕರಣ, ಬ್ಯಾಂಕ್ ಹಣ ವಸೂಲಾತಿ ಅಲ್ಲದೆ ವ್ಯಾಜ್ಯ ಪೂರ್ವ ಪ್ರಕರಣಗಳಾದ ಬ್ಯಾಂಕ್ ಸಾಲ ಮರು ಪಾವತಿ ಪ್ರಕರಣಗಳು, ನೀರಿನ ಕರ ವಸೂಲಿ, ಕಂದಾಯ ಪ್ರಕರಣಗಳು ಇನ್ನಿತರ ಲಘು ವ್ಯಾಜ್ಯಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ಲೋಕ ಅದಾಲತ್ ಮೂಲಕ ಇತ್ಯರ್ಥಪಡಿಸಲಾಗುವುದು. ನ್ಯಾಯಾಲಯಗಳಲ್ಲಿ ಪ್ರತಿದಿನ ಪೂರ್ವಸಂಧಾನ ಪ್ರಕ್ರಿಯೆಯು ನಡೆಯಲಿದ್ದು ಪಕ್ಷಗಾರರುಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶೆ ಜಿ.ಕೆ. ದಾಕ್ಷಾಯಿಣಿ ಮಾತನಾಡಿ, ಸರ್ಕಾರದ ಆದೇಶದಂತೆ ಪೊಲೀಸ್ ಇಲಾಖೆಯಲ್ಲಿನ ಸಂಚಾರಿ ಈ ಚಲನ್‌ನ ದಂಡ ಪ್ರಕರಣಗಳು ಮತ್ತು ಸಾರಿಗೆ ಇಲಾಖೆಯಲ್ಲಿ 1990-91ನೇ ಸಾಲಿನಿಂದ 2020ನೇ ಸಾಲಿನ ವರೆಗೂ ಬಾಕಿ ಉಳಿದಿರುವ ದಂಡದ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ ನೀಡಿದ್ದು ದಂಡ ಪಾವತಿಸಲು ನ. 21 ರಿಂದ ಡಿ. 12ರ ವರೆಗೂ ಕಾಲಾವಕಾಶ ನೀಡಲಾಗಿದೆ ಎಂದು ಹೇಳಿದರು.

ಹೆಚ್ಚಿನ ಮಾಹಿತಿಗಾಗಿ ನ್ಯಾಯಾಲಯ ಆವರಣದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ತಾಲ್ಲೂಕು ಕಾನೂನು ಸೇವಾ ಸಮಿತಿಗಳನ್ನು ಸಂಪರ್ಕಿಸಬಹುದು. ಉಚಿತ ಕಾನೂನು ಸಹಾಯವಾಣಿ 15100 ಮೂಲಕವೂ ಮಾಹಿತಿ ಪಡೆಯಬಹುದಾಗಿದೆ ಎಂದು ತಿಳಿಸಿದರು.

## ದಲಿತರ ಮೇಲಿನ ದೌರ್ಜನ್ಯ ಖಂಡಿಸಿ ನ. 28ಕ್ಕೆ ಪ್ರತಿಭಟನೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ದೇಶಾದ್ಯಂತ ನಡೆಯುತ್ತಿರುವ ದಲಿತರ ಮೇಲಿನ ದೌರ್ಜನ್ಯ, ಅಸಹಿಷ್ಣುತೆ ಮತ್ತು ಸಂವಿಧಾನದ ಕಗ್ಗೊಲೆ ಖಂಡಿಸಿ ನ. 28 ರಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಟಿಪ್ಪು ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ಮುಬಷಿರ್ ಅಹ್ಮದ್ ಹೇಳಿದರು.

ಸುದ್ದಿಗೋಷ್ಟಿಯಲ್ಲಿ ಮಂಗಳವಾರ ಮಾತನಾಡಿ, ಸಂವಿಧಾನ ಸಮರ್ಪಣಾ ದಿನದ ಪ್ರಯುಕ್ತ ಬೃಹತ್ ಮಟ್ಟದ ಹೋರಾಟ ಕೈಗೊಳ್ಳಲಾಗಿದೆ. ಇಂದಿಗೂ ದೇಶದಲ್ಲಿ ಜಾತಿ, ಧರ್ಮಾಧಾರಿತ ದೌರ್ಜನ್ಯಗಳಿವೆ. ಆರ್‌ಎಸ್‌ಎಸ್ ಮತ್ತು ಅದರ ಮನುವಾದಿ ಚಿಂತನೆಗಳೇ ದಲಿತರ ಮೇಲಿನ ಹಲ್ಲೆ, ಧ್ವಂಸಗಳು ಹಾಗು ಜಾತಿ ದಮನಕ್ಕೆ ಕಾರಣ ಎಂದು ಆರೋಪಿಸಿದ ಅವರು, ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳ ಮೇಲೆ ನಡೆದ ಅವಮಾನ, ರಾಜ್ಯ ಮಟ್ಟದ ರಾಜಕೀಯ ನಾಯಕರಿಗೆ ಬಂದ ಬೆದರಿಕೆ, ದಲಿತ ಕುಟುಂಬಗಳ ಮೇಲೆ ನಡೆದ ಹಲ್ಲೆಗಳು, ಬೌದ್ಧ-ಅಂಬೇಡ್ಕರ್ ಪ್ರತಿಮೆಗಳ ಧ್ವಂಸ ಖಂಡಿಸಿ ಸಂವಿಧಾನವನ್ನು ದೇಶಕ್ಕೆ ಸಮರ್ಪಿಸಿದ ದಿನವಾದ ನ.26 ರಂದು ರ್‍ಯಾಲಿ ಹಮ್ಮಿಕೊಳ್ಳಲಾಗಿದೆ ಎಂದರು.

## ಹಿಂಬಾಗಿಲ ಬೀಗ ಮುರಿದು ಚಿನ್ನಾಭರಣ ಕಳವು

ಸಕಲೇಶಪುರ: ಮನೆಯಲ್ಲಿ ಯಾರೂ ಇಲ್ಲದಿರುವುದನ್ನು ಖಚಿತಪಡಿಸಿಕೊಂಡು ಹಿಂಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು ನಗದು ಸೇರಿ 95 ಸಾವಿರ ರೂ. ಮೌಲ್ಯದ ಚಿನ್ನಾಭರಣ ದೋಚಿರುವ ಘಟನೆ ತಾಲ್ಲೂಕಿನ ಬಾಳ್ಳುಪೇಟೆ ಗ್ರಾಮದಲ್ಲಿ ನಡೆದಿದೆ.

ಲಲಿತಾ ಎಂಬುವವರ ಮನೆಯಲ್ಲಿ ಸೋಮವಾರ ಕಳ್ಳತನ ನಡೆದಿದೆ. ಧರ್ಮಸ್ಥಳದಲ್ಲಿ ಹಮ್ಮಿಕೊಂಡಿದ್ದ ಪುತ್ರಿಯ ಮದುವೆ ಸಮಾರಂಭಕ್ಕಾಗಿ ಲಲಿತಾ ಹಾಗು ಕುಟುಂಬಸ್ಥರು ಮನೆಗೆ ಬೀಗ ಹಾಕಿಕೊಂಡು ನ. 22 ರಂದು ತೆರಳಿದ್ದರು. ಮಾರನೇ ದಿನ ಸಂಜೆ ಬಂದು ನೋಡಿದಾಗ ಹಿಂಬಾಗಿಲಲ ಬೀಗ ಮುರಿದಿರುವುದು ಗೊತ್ತಾಗಿದೆ. ಬೀರುವಿನಲ್ಲಿಟ್ಟಿದ್ದ 2 ಗ್ರಾಂ ತೂಕದ ಒಂದು ಜೊತೆ ಚಿನ್ನದ ಓಲೆ, 10 ಸಾವಿರ ರೂ. ನಗದು, 5 ಗ್ರಾಂ ತೂಕದ ಚಿನ್ನದ ಒಂದು ಜೊತೆ ಓಲೆ, 4 ಗ್ರಾಂ ತೂಕದ ಚಿನ್ನದ ಒಂದು ಜೊತೆ ಓಲೆ, 6 ಗ್ರಾಂ ತೂಕದ ಚಿನ್ನದ ಉಂಗುರ ಕಳವು ಮಾಡಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಜಿಲ್ಲೆಯ 100 ಅಂಗನವಾಡಿಗಳಲ್ಲಿ ಇಂಗ್ಲಿಷ್ ಮಿಡಿಯಂ

## ನ. 28 ರಿಂದ ತರಗತಿ ಆರಂಭ | ಶಿಕ್ಷಕಿಯರಿಗೆ ತರಬೇತಿ, ಪಠ್ಯ ಪುಸ್ತಕ ವಿತರಣೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಅಂಗನವಾಡಿ ಮಕ್ಕಳ ಕಲಿಕೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿಸಲು ಸರ್ಕಾರ ಇಂಗ್ಲಿಷ್ ಮಾಧ್ಯಮ ಆರಂಭಕ್ಕೆ ಮುಂದಾಗಿದ್ದು ಜಿಲ್ಲೆಯ 100 ಅಂಗನವಾಡಿ ಕೇಂದ್ರಗಳಲ್ಲಿ ನ. 28 ರಿಂದ ಇಂಗ್ಲಿಷ್ ಕಲಿಕೆ ಪ್ರಾರಂಭವಾಗಲಿದೆ.

ರಾಜ್ಯಾದ್ಯಂತ ಸಾವಿರ ಅಂಗನವಾಡಿಗಳಲ್ಲಿ ಇಂಗ್ಲಿಷ್ ಮಿಡಿಯಂ ಆರಂಭಿಸಲು ಕ್ರಮ ವಹಿಸಲಾಗಿದೆ. ಅದಕ್ಕಾಗಿ ಸ್ಮಾರ್ಟ್ ಟಿವಿ, ಪಠ್ಯ ಪುಸ್ತಕಗಳ ಪೂರೈಕೆಯಾಗಿದೆ. ಅಂಗನವಾಡಿ ಶಿಕ್ಷಕಿಯರಿಗೆ ಈಗಾಗಲೇ ತರಬೇತಿ ಸಹ ನೀಡಲಾಗಿದೆ.

ನೂತನ ಯೋಜನೆಯಿಂದ ಸುಮಾರು 1,300 ಮಕ್ಕಳಿಗೆ ಅನುಕೂಲವಾಗಲಿದ್ದು, ಬಡ ಪೋಷಕರಿಗೆ ಖಾಸಗಿ ಶಾಲೆಗಳ ಭಾರ ತಪ್ಪಲಿದೆ. ಜಿಲ್ಲೆಯ 8 ತಾಲ್ಲೂಕುಗಳಲ್ಲಿ ಒಟ್ಟು 2,691 ಅಂಗನವಾಡಿಗಳು ಕಾರ್ಯ ನಿರ್ವಹಿಸುತ್ತಿವೆ. ಈ ಪೈಕಿ ಆಯ್ದ 100 ಅಂಗನವಾಡಿ ಕೇಂದ್ರಗಳಲ್ಲಿ ಎಲ್‌ಕೆಜಿ ಹಾಗೂ ಯುಕೆಜಿ ಆರಂಭಿಸಲು ಕ್ರಮ ವಹಿಸಲಾಗಿದೆ.

### 1,300 ಮಕ್ಕಳಿಗೆ ಅನುಕೂಲ

ಜಿಲ್ಲಾದ್ಯಂತ 66,000 ಮಕ್ಕಳು ಈಗಾಗಲೇ ಪೂರ್ವ ಪ್ರಾಥಮಿಕ ಶಿಕ್ಷಣ ಪಡೆಯುತ್ತಿದ್ದಾರೆ. ಎಲ್‌ಕೆಜಿಗೆ 4-5 ವರ್ಷದ 800 ಹಾಗುಯುಕೆಜಿಗೆ 500 ಮಕ್ಕಳು ಸೇರಿ ವಯಸ್ಸಿಗನುಗುಣವಾಗಿ 1,300 ಮಕ್ಕಳು ದಾಖಲಾಗಬಹುದು. ಸಾವಿರಾರು ರೂ. ಡೊನೇಶನ್ ನೀಡಿ ಮಕ್ಕಳನ್ನು ಖಾಸಗಿ ಶಾಲೆಗಳಿಗೆ ಕಳುಹಿಸಲು ಸಾಧ್ಯವಿಲ್ಲದ ಪೋಷಕರಿಗೆ ಈ ಕಾರ್ಯಕ್ರಮ ವರದಾನವಾಗುತ್ತದೆ ಎಂದು ಭಾವಿಸಲಾಗುತ್ತಿದೆ.

### ಅಂಗನವಾಡಿ ಶಿಕ್ಷಕಿಯರಿಗೆ ತರಬೇತಿ

ಎಲ್‌ಕೆಜಿ ಹಾಗೂ ಯುಕೆಜಿ ಶಿಕ್ಷಣವನ್ನು ಪರಿಣಾಮಕಾರಿಯಾಗಿ ಬೋಧಿಸುವ ನಿಟ್ಟಿನಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗೆ ವಿದ್ಯಾರ್ಹತೆ ಅನುಗುಣವಾಗಿ ತರಬೇತಿ ನೀಡಲಾಗಿದೆ.

500 ಮೀ. ವ್ಯಾಪ್ತಿಯಲ್ಲಿರುವ ಅಂಗನವಾಡಿ ಕೇಂದ್ರಗಳನ್ನು ಟ್ಯಾಗ್ ಮಾಡುವುದರ ಮೂಲಕ ಸಂಖ್ಯೆಯನ್ನು ನಿರ್ಧರಿಸಲಾಗುವುದು. ಬೆಳಿಗ್ಗೆ 10 ರಿಂದ 12 ಗಂಟೆವರೆಗೆ ಎಲ್‌ಕೆಜಿ ಹಾಗು ಯುಕೆಜಿ ಶಿಕ್ಷಣಕ್ಕೆ ವೇಳಾಪಟ್ಟಿ ನಿಗದಿಪಡಿಸಿ ನಂತರದ ಅವಧಿಯಲ್ಲಿ ಅಂಗನವಾಡಿ ಕಾರ್ಯಚಟುವಟಿಕೆಗಳು ಮುಂದುವರಿಯಲಿವೆ.



> ಜಿಲ್ಲೆಯ 100 ಅಂಗನವಾಡಿ ಕೇಂದ್ರಗಳಲ್ಲಿ ಇಂಗ್ಲಿಷ್ ಮಿಡಿಯಂ ಪ್ರಾರಂಭಿಸಲು ಸಿದ್ಧತೆ ಮಾಡಿಕೊಂಡಿದ್ದು ಶಿಕ್ಷಕಿಯರಿಗೆ ಈಗಾಗಲೇ ತರಬೇತಿ ನೀಡಲಾಗಿದೆ. ಮೂರು ಪಠ್ಯ ಪುಸ್ತಕ ಹಾಗು ಸ್ಮಾರ್ಟ್ ಟಿವಿಗಳನ್ನು ಅಂಗನವಾಡಿಗಳಿಗೆ ಒದಗಿಸಲಾಗಿದೆ. ನ. 28ರಂದು ರಾಜ್ಯಾದ್ಯಂತ ಯೋಜನೆಗೆ ಚಾಲನೆ ಸಿಗಲಿದೆ.
>
> **- ಎಂ.ಆರ್.ಧರಣಿಕುಮಾರ್, ಉಪನಿರ್ದೇಶಕರು, ಮಹಿಳಾ ಹಾಗೂ ಮಕ್ಕಳ ಕಲ್ಯಾಣ ಇಲಾಖೆ ಹಾಸನ**

ಜಿಲ್ಲೆಯಲ್ಲಿ ಆಯ್ದ 701 ಅಂಗನವಾಡಿ ಕೇಂದ್ರಗಳಲ್ಲಿ ಸಕ್ಷಮ್ ಯೋಜನೆಯಡಿ ಟಿವಿ ಮತ್ತು ಇನ್ನಿತರ ಉಪಕರಣಗಳನ್ನು ಈಗಾಗಲೇ ಖರೀದಿಸಲಾಗಿದೆ. ಟಿವಿ ವೀಕ್ಷಣೆ ಮೂಲಕ ಮಕ್ಕಳ ಕಲಿಕೆಗೆ ಉತ್ತೇಜನ ನೀಡುವ ಜೊತೆಗೆ ಪೂರ್ವ ಪ್ರಾಥಮಿಕ ಶಿಕ್ಷಣ ಫಲಪ್ರದವಾಗಬೇಕೆಂಬ ಆಶಯ ಹೊಂದಲಾಗಿದೆ. ಜೊತೆಗೆ ಆಯ್ಕೆಯಾಗಿರುವ ಅಂಗನವಾಡಿ ಕೇಂದ್ರಗಳಲ್ಲಿ ಕೈತೋಟ ನಿರ್ಮಿಸಿ ನಾನಾ ತರಕಾರಿ ಬೆಳೆದು ಮಕ್ಕಳಿಗೆ ಪೌಷ್ಟಿಕ ಆಹಾರ ನೀಡಿ ಅಪೌಷ್ಟಿಕತೆ ಹೋಗಲಾಡಿಸುವ ಗುರಿಯನ್ನು ಸಹ ಹೊಂದಲಾಗಿದೆ.

### ಬಹುತೇಕ ಕಡೆ ಸೌಕರ್ಯ ಕೊರತೆ

ಅಂಗನವಾಡಿಗಳ ಬಲವರ್ಧನೆಗಾಗಿ ಸರ್ಕಾರ ಎಲ್‌ಕೆಜಿ ಮತ್ತು ಯುಕೆಜಿ ಆರಂಭಿಸುತ್ತಿದೆಯಾದರೂ ಬಹುತೇಕ ಕಡೆ ಮೂಲಸೌಕರ್ಯ ಕೊರತೆಯಿಂದ ಹಾಜರಾಗುವ ಮಕ್ಕಳ ಸಂಖ್ಯೆಗಣನೀಯ ಕುಸಿತವಾಗುತ್ತಿದೆ. ಖಾಸಗಿ ಶಾಲೆಗಳ ತೀವ್ರ ಪೈಪೋಟಿ ನಡುವೆ ಅಂಗನವಾಡಿಗಳ ಉಳಿಸಿಕೊಳ್ಳುವುದು ಸವಾಲಿನ ಕೆಲಸ. ಕೆಲವೆಡೆ ಖಾಸಗಿ ಕಟ್ಟಡಗಳಲ್ಲಿ ತರಗತಿ ನಡೆಸಲಾಗುತ್ತಿದೆ. ಕಾಂಪೌಂಡ್, ರಸ್ತೆ, ಕುಡಿಯುವ ನೀರು, ಶೌಚಾಲಯ, ಸಿಬ್ಬಂದಿ ಕೊರತೆಯಿಂದ ಅಂಗನವಾಡಿಗಳು ಬಳಲುತ್ತಿದ್ದು ಸರ್ಕಾರ ಆ ಕಡೆಗೂ ಗಮನ ಹರಿಸಬೇಕಿದೆ ಎಂಬ ಆಗ್ರಹ ಕೇಳಿಬಂದಿದೆ.

### ಇಂಗ್ಲಿಷ್ ಮಿಡಿಯಂಗೆ ಆಯ್ಕೆಯಾದ ಅಂಗನವಾಡಿಗಳ ವಿವರ

#### ತಾಲ್ಲೂಕು- ಕೇಂದ್ರಗಳ ಸಂಖ್ಯೆ

| | | | |
|---|---|---|---|
| ಹಾಸನ | 10 | ಆಲೂರು | 04 |
| ಚನ್ನರಾಯಪಟ್ಟಣ | 06 | ಅರಸೀಕೆರೆ | 22 |
| ಹೊಳೆನರಸೀಪುರ | 15 | ಅರಕಲಗೂಡು | 27 |
| ಬೇಲೂರು | 12 | | |
| ಸಕಲೇಶಪುರ | 04 | ಒಟ್ಟು | 100 |

### ಅಂಗನವಾಡಿಗಳಿಗೆ ಸುವರ್ಣ ಸಂಭ್ರಮ

1975ರ ಅಕ್ಟೋಬರ್ 2ರಂದು ದೇಶಾದ್ಯಂತ ಮಕ್ಕಳಿಗೆ ಪೂರ್ವ ಪ್ರಾಥಮಿಕ ಶಿಕ್ಷಣ ನೀಡುವ ಸಲುವಾಗಿ ಅಂಗನವಾಡಿ ಕೇಂದ್ರಗಳನ್ನು ಆರಂಭಿಸಲಾಯಿತು. 2025ರ ಅಕ್ಟೋಬರ್ 2ಕ್ಕೆ 75 ವರ್ಷ ಪೂರೈಸಿ ಸುವರ್ಣ ಸಂಭ್ರಮದ ಹೊಸ್ತಿಲಲ್ಲಿರುವುದರಿಂದ ಎಲ್‌ಕೆಜಿ ಹಾಗೂಯುಕೆಜಿಗೆ ಅಧಿಕೃತ ಚಾಲನೆ ನೀಡಲಾಗುತ್ತಿದೆ.

# ಪರೀಕ್ಷೆಗೆ ಭಯಪಡದೆ ಧೈರ್ಯದಿಂದ ಎದುರಿಸಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಕಲಗೂಡು: ವಿದ್ಯಾರ್ಥಿಗಳು ಪರೀಕ್ಷೆಗಳಿಗೆ ಭಯಪಡದೆ ಧೈರ್ಯದಿಂದ ಎದುರಿಸಬೇಕು ಎಂದು ಸಂಗೀತ ವಿದ್ವಾನ್ ಆರ್.ಕೆ. ಪದ್ಮನಾಭ್ ಸಲಹೆ ನೀಡಿದರು.

ಶಿಕ್ಷಣ ಇಲಾಖೆ ಸೋಮವಾರ ನಿಧಾನಗತಿ ಕಲಿಕೆಯ ಸರ್ಕಾರಿ ಪ್ರೌಢಶಾಲೆಗಳ 10ನೇ ತರಗತಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಪಠ್ಯಾಧಾರಿತ ರಸಪ್ರಶ್ನೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಫಲಿತಾಂಶ ಉತ್ತಮಗೊಳಿಸಲು ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ರಸ ಪ್ರಶ್ನೆ ಕಾರ್ಯಕ್ರಮದ ಹಮ್ಮಿಕೊಂಡಿರುವುದು ಉತ್ತಮ ಕಾರ್ಯ. ವಿದ್ಯಾರ್ಥಿಗಳ ಉತ್ತಮ ಭವಿಷ್ಯಕ್ಕಾಗಿ ಸತತ ಪ್ರಯತ್ನ ನಡೆದಿದ್ದು ವಿದ್ಯಾರ್ಥಿಗಳು ಸಾಧನೆಯ ಮೂಲಕ ಗುರು ದಕ್ಷಿಣೆ ನೀಡಬೇಕು. ಜಿಲ್ಲಾ ಮಟ್ಟದ ಫಲಿತಾಂಶದಲ್ಲಿ ಮೂರನೇ ಸ್ಥಾನದಲ್ಲಿರುವ ತಾಲೂಕು ಮೊದಲ ಸ್ಥಾನಕ್ಕೆ ಏರುವಂತಾಗಬೇಕು. ಸರ್ಕಾರಿ ಶಾಲೆಯಲ್ಲಿ ಓದುವ 10ನೇ ತರಗತಿ ಪರೀಕ್ಷೆಯಲ್ಲಿ ಮೊದಲ ಸ್ಥಾನಗಳಿಸುವ ವಿದ್ಯಾರ್ಥಿಗೆ 15 ಸಾವಿರ ರೂ. ನಗದು ಬಹುಮಾನವನ್ನು ಪ್ರತಿವರ್ಷ ನೀಡುವುದಾಗಿ ಘೋಷಿಸಿದರು.

ತಹಶೀಲ್ದಾರ್ ಕೆ.ಸಿ. ಸೌಮ್ಯ ಮಾತನಾಡಿ, ಒತ್ತಡಗಳಿಗೆ ಒಳಗಾಗದೆ ವಿದ್ಯಾರ್ಥಿಗಳು ಸಾಧನೆಯ ಕಡೆಗೆ ಗಮನ ಹರಿಸಬೇಕು. ಅಂಕಗಳನ್ನು ಗಳಿಸುವುದಷ್ಟಕ್ಕೆ ಸೀಮಿತರಾಗದೆ ಬದುಕಿನ ಮೌಲ್ಯಗಳನ್ನು ಅಳವಡಿಸಿಕೊಳ್ಳುವಂತೆ ಹೇಳಿದರು.

ಬಿಇಒ ಕೆ.ಪಿ. ನಾರಾಯಣ್, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ರಂಗಸ್ವಾಮಿ, ತಾಲ್ಲೂಕು ಪ್ರೌಢಶಾಲಾ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಮಧುಕರ್, ಕಾರ್ಯದರ್ಶಿ ಬೋರಣ್ಣಗೌಡ, ಸಹ ಶಿಕ್ಷಕರ ಸಂಘದ ಅಧ್ಯಕ್ಷ ಜಗದೀಶ್, ಕಾರ್ಯದರ್ಶಿ ವಿವೇಕಾನಂದ ಉಪಸ್ಥಿತರಿದ್ದರು.

# ದೇವರ ಸ್ಮರಣೆಯಿಂದ ನೆಮ್ಮದಿ ಬದುಕು ಸಾಧ್ಯ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ದೇವರ ಸ್ಮರಣೆ ಹಾಗೂ ಧಾರ್ಮಿಕ ಕಾರ್ಯಗಳಲ್ಲಿ ಪಾಲ್ಗೊಳ್ಳುವುದರಿಂದ ಮನುಷ್ಯ ನೆಮ್ಮದಿ ಪಡೆಯಲು ಸಾಧ್ಯವೆಂದು ತಿಪಟೂರು ತಾಲ್ಲೂಕು ಕೆರಗೋಡಿ ರಂಗಾಪುರ ಶ್ರೀಮಠದ ಪೀಠಾಧಿಪತಿ ಶ್ರೀ ಗುರುಪರದೇಶೀಕೇಂದ್ರ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಚಲುವನಹಳ್ಳಿಯ ಗವಿಮಠದ ಆವರಣದಲ್ಲಿ ನಿರ್ಮಿಸಿರುವ ಶ್ರೀಗುರು ಭಜನಾ ಮಂದಿರ ಲೋಕಾರ್ಪಣೆಗೊಳಿಸಿ ನಂತರ ನಡೆದ ಧಾರ್ಮಿಕ ಸಮಾರಂಭದಲ್ಲಿ ಮಾತನಾಡಿ, ಸದ್ಗುರು ಸಿದ್ದಮಲ್ಲಾರ್ಯರ ತಪೋ ಮಹಿಮೆಯ ಪುಣ್ಯ ಭೂಮಿಯಲ್ಲಿ ಶ್ರೀಗುರು ಸಪ್ತಾಹ ಸೇರಿ ವಿವಿಧ ಧಾರ್ಮಿಕ ಕೈಂಕರ್ಯಗಳು ನಿತ್ಯ ನಿರಂತರವಾಗಿ ನಡೆಯುತ್ತಿವೆ. ಮಹಾಮಹಿಮರ ಆಧ್ಯಾತ್ಮಿಕ ತತ್ವ, ಚಿಂತನೆ ಮತ್ತು ಆದರ್ಶಗಳನ್ನು ಪಾಲಿಸಿದರೆ ಬದುಕು ಹಸನಾಗುವ ಜೊತೆಗೆ ಮೋಕ್ಷ ಪಡೆಯಲು ಸಾಧ್ಯವಾಗಲಿದೆ. ದಾನಿಗಳು ಹಾಗೂ ಭಕ್ತರ ಸಹಕಾರದಿಂದ ನಿರ್ಮಾಣಗೊಂಡಿರುವ ಭಜನಾ ಮಂದಿರ ಧಾರ್ಮಿಕ ಸತ್ಕಾರ್ಯಗಳಿಗೆ ಸದ್ಬಳಕೆಯಾಗಲೆಂದು ಆಶಿಸಿದರು.

ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಬಿ.ಎಸ್. ಅರುಣ್ ಕುಮಾರ್ ಮಾತನಾಡಿ, 12ನೇ ಶತಮಾನದಲ್ಲಿ ಬಸವಾದಿ ಶಿವಶರಣರು ಸಮ ಸಮಾಜ ನಿರ್ಮಾಣಕ್ಕೆ ಮುನ್ನುಡಿ ಬರೆದಿದ್ದಾರೆ. ಅಂತಹ ಮಹನೀಯರು ಹಾಕಿಕೊಟ್ಟ ಮಾರ್ಗದಲ್ಲಿ ಕೆರಗೋಡಿ ರಂಗಾಪುರದ ಶ್ರೀಮಠ ಕಾರ್ಯೋನ್ಮುಖವಾಗಿರುವುದು ಹೆಮ್ಮೆಯ ಸಂಗತಿ. ಹಸಿದವರಿಗೆ ಅನ್ನ, ಅಕ್ಷರ, ಅರಿವು ನೀಡಿ ಬೆಳಕಿನೆಡೆಗೆ ಕೊಂಡೊಯ್ಯುತ್ತಿರುವ ಸ್ವಾಮೀಜಿಯವರ ಸಾಮಾಜಿಕ ಕಳಕಳಿ ಮಾದರಿಯಾಗಿದೆ ಎಂದು ಬಣ್ಣಿಸಿದರು.

ಶ್ರೀಕ್ಷೇತ್ರಾಭಿಮಾನಿಗಳ ಸಂಘದ ಅಧ್ಯಕ್ಷ ಯು. ಕೆ.ಶಿವಪ್ಪ ಮಾತನಾಡಿದರು. ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಜಾವಗಲ್ ರಾಜಶೇಖರ್, ಇಂಜಿನಿಯರ್ ಪ್ರಕಾಶ್, ಬಸವರಾಜು, ಗುತ್ತಿಗೆದಾರ ಹರೀಶ್, ಕಾಟೀಕೆರೆ ಶಂಕರಪ್ಪ, ಲೋಕೇಶ್ ಹಾಜರಿದ್ದರು.

# ಅನುದಾನ ಆಧರಿಸಿ ಅಭಿವೃದ್ಧಿ ಕಾಮಗಾರಿ: ಸಂಸದ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹೊಳೆನರಸೀಪುರ: ಪಟ್ಟಣದ ಅಭಿವೃದ್ಧಿಗೆ ಹಂತ ಹಂತವಾಗಿ ಅನುದಾನಕ್ಕೆ ಅನುಗುಣವಾಗಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಶ್ರಮಿಸುವುದಾಗಿ ಸಂಸದ ಶ್ರೇಯಸ್ ಪಟೇಲ್ ತಿಳಿಸಿದರು.

ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ನಗರದಲ್ಲಿ ಸಂಸದರ ನಿಧಿಯಿಂದ ನೂತನವಾಗಿ ನಿರ್ಮಿಸಲು ಉದ್ದೇಶಿಸಿರುವ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿ, ಕೊಳಚೆ ನಿರ್ಮೂಲನಾ ಮಂಡಳಿ ವತಿಯಿಂದ ನಿರ್ಮಿಸಿರುವ ಮನೆಗಳಿಗೆ ಪೂರ್ಣ ಪ್ರಮಾಣದಲ್ಲಿ ಬಿಲ್ ಪಾವತಿಸದೆ ಇರುವುದರಿಂದ ಮನೆ ಕಾಮಗಾರಿ ಪೂರ್ಣಗೊಳಿಸಿಕೊಳ್ಳಲು



ಸಾಧ್ಯವಾಗದೆ ಅತಂತ್ರ ಸ್ಥಿತಿಯಲ್ಲಿ ಫಲಾನುಭವಿಗಳಿದ್ದಾರೆ. ಈ ಕುರಿತು ಕೊಳಚೆ ನಿರ್ಮೂಲನಾ ಮಂಡಳಿ ಅಧಿಕಾರಿಗಳ ಗಮನ ಸೆಳೆಯುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ನೆರೆದಿದ್ದ ನಾಗರಿಕರ, ಪಟ್ಟಣದಲ್ಲಿ ಮೃತಪಟ್ಟವರ ಶವವನ್ನು ರುದ್ರಭೂಮಿಗೆ ಸಾಗಿಸುವ ಮಾರ್ಗದಲ್ಲಿ ರೈಲ್ವೆ ಹಳಿಗೆ ಅಡ್ಡಲಾಗಿ ಹಾಕಿರುವ ಕಬ್ಬಿಣದ ಕಂಬಗಳನ್ನು ತೆರವುಗೊಳಿಸಿ ಶವವನ್ನು ಸರಾಗವಾಗಿ ಕೊಂಡೊಯ್ಯಲು ಅವಕಾಶ ಕಲ್ಪಿಸಿ ಕೊಡಬೇಕೆಂದು ಮನವಿ ಮಾಡಿದರು.

ತಕ್ಷಣ ಕಾರ್ಯ ಪ್ರವೃತ್ತರಾದ ಸಂಸದರು ಸಂಬಂಧಪಟ್ಟ ರೈಲ್ವೆ ಅಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ ಈ ಕುರಿತು ತುರ್ತಾಗಿ ಅಗತ್ಯ ಕ್ರಮ ಕೈಗೊಂಡು ಶವವನ್ನು ಸರಾಗವಾಗಿ ಕೊಂಡೊಯ್ಯಲು ಅವಕಾಶ ಕಲ್ಪಿಸಬೇಕೆಂದು ತಿಳಿಸಿ, ಶವವನ್ನು ರುದ್ರಭೂಮಿಗೆ ರೈಲ್ವೆ ಹಳಿ ಮೂಲಕ ಸಾಗಿಸಲು ಕೇಂದ್ರ ರೈಲ್ವೆ ಇಲಾಖೆಯವರೊಂದಿಗೆ ಸಂಪರ್ಕದಲ್ಲಿದ್ದು 8 ಕೋಟಿ ರೂ. ಗೂ ಅಧಿಕ ವೆಚ್ಚದಲ್ಲಿ ಮೇಲ್ಸೇತುವೆ ನಿರ್ಮಿಸಲು ಎಲ್ಲಾ ರೀತಿಯಲ್ಲಿ ಪ್ರಯತ್ನ ಮುಂದುವರೆದಿದ್ದು ಸದ್ಯದಲ್ಲಿಯೇ ಈ ಕಾಮಗಾರಿ ಪ್ರಾರಂಭವಾಗುವುದು ಎಂದು ತಿಳಿಸಿದರು.

ಪುಟ್ಟಸ್ವಾಮಿಗೌಡ ಅವರು ಸಂಸದರಾದ ಸಮಯದಲ್ಲಿ ಅಂಬೇಡ್ಕರ್ ನಗರದಲ್ಲಿ ಎರಡು ಸಮುದಾಯ ಭವನಗಳನ್ನು ನಿರ್ಮಿಸಿದ್ದು ಅವುಗಳನ್ನು ಅಭಿವೃದ್ಧಿಪಡಿಸಲು ತಾವು ಮುಂದಾಗಬೇಕೆಂದು ಗ್ರಾಮಸ್ಥರು ಸಂಸದರ ಬಳಿ ತಿಳಿಸಿದಾಗ, ಎರಡು ಭವನಗಳನ್ನು ದುರಸ್ತಿ ಪಡಿಸಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಹಲವು ವರ್ಷಗಳಿಂದ ದುಸ್ಥಿತಿ ಹಂತ ತಲುಪಿರುವ ಎಂಎಂವಿಕೆ ಹಳೆಯ ಶಾಲಾ ಕಟ್ಟಡವನ್ನು ಪುರಸಭೆಗೆ ಹತ್ತಾಂತರಿಸಿ ಆ ಜಾಗದಲ್ಲಿ ಅಂಬೇಡ್ಕರ್ ಗ್ರಂಥಾಲಯ ಹಾಗೂ ಸ್ತ್ರೀ ಶಕ್ತಿ ಭವನವನ್ನು ನಿರ್ಮಾಣ ಮಾಡಿಸುವ ಕುರಿತು ಸಂಬಂಧ ಪಟ್ಟವರ ಗಮನ ಸೆಳೆಯಬೇಕೆಂದು ಸಂಸದರಲ್ಲಿ ಮನವಿ ಮಾಡಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಟಿ.ಲಕ್ಷ್ಮಣ, ಪುರಸಭೆ ಮಾಜಿ ಅಧ್ಯಕ್ಷ ಪುಟ್ಟರಾಜು, ಎಪಿಎಂಸಿ ಮಾಜಿ ಉಪಾಧ್ಯಕ್ಷ ರಂಗಸ್ವಾಮಿ, ಹಿರಿಯ ನಿವೃತ್ತ ವಿಜ್ಞಾನಿ ಪಿ.ಅಣ್ಣಯ್ಯ, ಮುಖಂಡರಾದ ರಾಘವೇಂದ್ರ, ಕೆ .ಕೆ.ಶೋಭಾ, ರಾಜೇಶ್, ಕೃಷ್ಣ, ಕೃಷ್ಣಮೂರ್ತಿ, ಹೆಚ್.ಆರ್.ಪಾರ್ವತಿ, ರಂಗಸ್ವಾಮಿ, ವೆಂಕಟೇಶ್, ಶಂಕರ್ ಹಾಜರಿದ್ದರು.

# ಸಿಎಂ ಭೇಟಿ: ಕಾಂಗ್ರೆಸ್ ಮುಖಂಡರೊಂದಿಗೆ ಸಭೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಿ.6ರಂದು ಜಿಲ್ಲೆಗೆ ಭೇಟಿ ನೀಡಲಿರುವ ಹಿನ್ನೆಲೆ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಬೆಂಗಳೂರಿನಲ್ಲಿ ಜಿಲ್ಲಾ ಕಾಂಗ್ರೆಸ್ ಮುಖಂಡರು, ಜನಪ್ರತಿನಿಧಿಗಳೊಂದಿಗೆ ಸಭೆ ನಡೆಸಿದರು.

# ಇತಿಹಾಸದಲ್ಲಿ ಈ ದಿನ

## ನವೆಂಬರ್-26

1949: ಭಾರತದ ಸಂವಿಧಾನ ಸಭೆಯು ಭಾರತ ಸಂವಿಧಾನವನ್ನು ಅಂಗೀಕರಿಸಿದ ದಿನ. ಇದೇ ದಿನವನ್ನು ದೇಶದಲ್ಲಿ ಸಂವಿಧಾನ ದಿನ ಅಥವಾ ನ್ಯಾಯದಿನ ಎಂದು ಆಚರಿಸಲಾಗುತ್ತದೆ.

2008: ಮುಂಬೈನಲ್ಲಿ ನಡೆದ ಭಯೋತ್ಪಾದಕ ದಾಳಿ (26/11) ಭಾರತದ ಇತಿಹಾಸದಲ್ಲಿನ ಅತ್ಯಂತ ಭೀಕರ ದಾಳಿಗಳಲ್ಲಿ ಒಂದು.

1922: ಇಟಲಿಯಲ್ಲಿ ಬೆನಿಟೋ ಮುಸ್ಸೋಲಿನಿ ಪೂರ್ಣ ಅಧಿಕಾರ ಪಡೆದ ದಿನ.

1863: ಅಮೇರಿಕಾದಲ್ಲಿ ರಾಷ್ಟ್ರೀಯ ಧನ್ಯವಾದ ದಿನ ಮೊದಲ ಬಾರಿಗೆ ದೇಶವ್ಯಾಪಿಯಾಗಿ ಆಚರಿಸಲಾಯಿತು.

### ಜನನ

1921: ಎಸ್. ಚಂದ್ರಶೇಖರ್, ಭಾರತೀಯ ಮೂಲದ ಖ್ಯಾತ ಖಗೋಳಶಾಸ್ತ್ರಜ್ಞ, ನೋಬೆಲ್ ಪ್ರಶಸ್ತಿ ವಿಜೇತ

1961: ಸ್ಯಾಲಿ ರಿಡ್ಜ್, ನ್ಯೂಜಿಲ್ಯಾಂಡ್‌ನ ನಟಿ

1890: ಕೆ.ಪಿ. ಕೇಶವಮೆನನ್, ಮಲಯಾಳಂ ಭಾಷೆಯ ಪ್ರಮುಖ ಲೇಖಕ ಮತ್ತು ಸಂಪಾದಕ

1959: ಕಪಿಲ್ ದೇವ್, ಭಾರತದ ಕ್ರಿಕೆಟ್ ದಿಗ್ಗಜ, 1983 ವಿಶ್ವಕಪ್ ವಿಜೇತ ನಾಯಕ

### ಮರಣ

1855: ಆರ್ಥರ್ ಶೋಪೆನ್ಹೌರ್, ಜರ್ಮನ್ ತತ್ವಜ್ಞಾನಿ

1922: ಸರ್ಸ್ ಹೆನ್ರಿ ಬರ್ಟನ್, ಪ್ರಸಿದ್ಧ ಇಂಗ್ಲಿಷ್ ನಟ

1956: ಆರ್ಥರ್ ಜೇಮ್ಸ್ ಬೋಲ್ಡನ್, ಬ್ರಿಟಿಷ್ ರೈಲ್ವೆ ತಂತ್ರಜ್ಞ

# ಸಾಮಾಜಿಕ ಜಾಲತಾಣಗಳ ಸಾಧಕ-ಬಾಧಕ ಅರಿಯಿರಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಆಧುನಿಕತೆ ಬೆಳೆದಂತೆ ತಂತ್ರಜ್ಞಾನವು ನಿರೀಕ್ಷೆ ಮೀರಿ ಅಭಿವೃದ್ಧಿ ಹೊಂದುತ್ತಿದ್ದು ಅದರ ಸಾಧಕ-ಬಾಧಕಗಳನ್ನು ಅರಿತು ಬಳಕೆ ಮಾಡಬೇಕು. ಸ್ವಲ್ಪ ಎಚ್ಚರ ತಪ್ಪಿದರೂ ತೊಂದರೆ ಅನುಭವಿಸಬೇಕಾಗುತ್ತದೆಂದು ಸನ್ ಶೈನ್ ಲೀಜನ್ ಅಧ್ಯಕ್ಷೆ ಭಾನುಮತಿ ಹೇಳಿದರು. ನಗರದ ಮಹಾರಾಜ ಪಾರ್ಕ್‌ನ ಓಂ ಯೋಗ ಕೇಂದ್ರದಲ್ಲಿ ಸೀನಿಯರ್ ಚೇಂಬರ್ ಇಂಟರ್ನ್ಯಾಷನಲ್ ಸನ್ ಶೈನ್ ಲೀಜನ್‌ನ ನಾಲ್ಕು ಯುವ ಘಟಕಗಳ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿ, ಯುವಕ-ಯುವತಿಯರು ಸಾಮಾಜಿಕ ಜಾಲತಾಣಗಳಲ್ಲಿ ಸಕ್ರಿಯರಾಗಿದ್ದಾರೆ. ಸುಲಭದ ಇಂಟರ್‌ನೆಟ್ ಮನಸ್ಸಿನ ಮೇಲೆ ಗಾಢ ಪರಿಣಾಮ ಬೀರುತ್ತದೆ. ಫೇಸ್‌ಬುಕ್, ಇನ್‌ಸ್ಟಾಗ್ರಾಂ ಸೇರಿ ಅನೇಕ ಆ್ಯಪ್‌ಗಳು ಉಪಯೋಗ ಎಷ್ಟಿವೆಯೋ ಅಷ್ಟೇ ಅಪಾಯಕಾರಿ ಆಗಿವೆ. ಆದ್ದರಿಂದ ಮೊಬೈಲ್ ಬಳಕೆ ಕಡಿಮೆ ಮಾಡಿ ಬೇರೆ ಕೆಲಸಗಳತ್ತ ಗಮನ ಹರಿಸಬೇಕು. ಸಾಮಾಜಿಕ ಸೇವಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದರಿಂದ ಜನಸಂಪರ್ಕ ಹೆಚ್ಚಾಗಿ ಜ್ಞಾನ ವೃದ್ಧಿಯಾಗುತ್ತದೆ. ಮುಖ್ಯವಾಗಿ ಯುವಕರು ಸಂವಹನ,




ಸಂಪರ್ಕ ಕೌಶಲ ಬೆಳೆಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಹದಿಹರೆಯದಲ್ಲಿ ದುಶ್ಚಟ, ದುರಾಭ್ಯಾಸ, ದುರ್ನಡತೆಗೆ ಮನಸ್ಸು ಕೊಡದೆ ಒಳ್ಳೆಯ ದಾರಿಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಬೇಕು. ಗುರು ಹಿರಿಯರಿಗೆ ಗೌರವಿಸುವ ಹಾಗು ಸೇವಾ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಸನ್ ಶೈನ್ ಲೀಜನ್ ರಾಷ್ಟ್ರೀಯ ಯುವ ವಿಭಾಗ ಸಂಯೋಜಕ ಹುಸೇನ್ ಬೈಕಾಡಿ ಮಾತನಾಡಿ, ಮಕ್ಕಳು ಓದಿಗೆ ಹೆಚ್ಚಿನ ಗಮನ ಹರಿಸಬೇಕು. ಸಾಮಾಜಿಕ ಕೆಲಸ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಜಿಲ್ಲಾ ಕ್ರೀಡಾ ಪರಿಷತ್ ಕಾರ್ಯದರ್ಶಿ ನಿರಂಜನ್ ರಾಜ್ ಮಾತನಾಡಿ, ಯುವಕ-ಯುವತಿಯರು ವ್ಯಾಯಾಮ, ಆರೋಗ್ಯ, ಶಿಕ್ಷಣಕ್ಕೆ ಗಮನ ನೀಡುತ್ತಾ ಆರೋಗ್ಯಕರ ಬದುಕು ಕಟ್ಟಿಕೊಳ್ಳಬೇಕೆಂದರು. ಸನ್ ಶೈನ್ ಲೀಜನ್‌ನ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಯುವ ಘಟಕ, ಅಧ್ಯಯನ ಪ್ರೀ ಯುನಿವರ್ಸಿಟಿ ಕಾಲೇಜಿನ ಒಂದು ಯುವ ಘಟಕ, ಜನನಿ ಫೌಂಡೇಶನ್ ವತಿಯಿಂದ ಒಂದು ಯುವ ಘಟಕ ಹಾಗು ಕ್ರೀಡಾ ಪರಿಷತ್ ಮತ್ತು ಯೋಗ ಸಂಸ್ಥೆಯಿಂದ ತಲಾ ಒಂದು ಘಟಕ ಉದ್ಘಾಟಿಸಲಾಯಿತು.

ಸನ್ ಶೈನ್ ಲೀಜನ್ ಕಾರ್ಯದರ್ಶಿ ಭಾಗ್ಯ, ಖಜಾಂಚಿ ಶ್ವೇತಾ, ನಾಗೇಶ್ ಪ್ರಸಾದ್, ಉಪಸ್ಥಿತರಿದ್ದರು.

# ಬೇಲೂರಿನಲ್ಲಿ ಲಯನ್ಸ್ ಸಂಸ್ಥೆಯಿಂದ ಆರೋಗ್ಯ ಜಾಗೃತಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಲಯನ್ಸ್ ಸಂಸ್ಥೆ ವತಿಯಿಂದ ಮಹಿಳಾ ಸಬಲೀಕರಣ ಅಂಗವಾಗಿ ಆರೋಗ್ಯ ಜಾಗೃತಿ ಉದ್ದೇಶದಿಂದ ವಿಶೇಷ ಕಾರ್ಯಾಗಾರ ಹಾಗೂ ಅಡುಗೆ ಪ್ರಾತ್ಯಕ್ಷಿಕೆಯನ್ನು ಪಟ್ಟಣದ ಲಯನ್ಸ್ ಭವನದಲ್ಲಿ ಹಮ್ಮಿಕೊಳ್ಳಲಾಯಿತು.

ಎಎಂಸಿ ಕುಕ್‌ವೇರ್ ಕಂಪನಿಯಿಂದ ಎಣ್ಣೆಯಿಲ್ಲದೆ ಆರೋಗ್ಯಕರ ಅಡುಗೆ ಮಾಡುವ ವಿಧಾನ, ಪೌಷ್ಟಿಕಾಂಶ ಕಳೆದುಕೊಳ್ಳದಂತೆ ತರಕಾರಿಗಳನ್ನು ಬೇಯಿಸುವ ತಂತ್ರ ಹಾಗೂ ತೈಲರಹಿತ ಅಡುಗೆ ಬೇಯಿಸುವ ಪ್ರಯೋಜನಗಳನ್ನು ತೋರಿಸಲಾಯಿತು.

ಆಹಾರವೇ ಆರೋಗ್ಯ ಕಾರ್ಯಾಗಾರದಲ್ಲಿ ಸಮತೋಲನ ಆಹಾರ ಪದ್ಧತಿ, ದೈನಂದಿನ ಆಹಾರದಲ್ಲಿ ಮಾಡಬೇಕಾದ ಬದಲಾವಣೆ, ಕೊಬ್ಬಿನಾಂಶದಿಂದಾಗುವ ಅಪಾಯ, ನಾನ್ ಸ್ಟಿಕ್ ಬಳಕೆ ಅಪಾಯ ಮಕ್ಕಳ ಹಾಗೂ ವಯೋವೃದ್ಧರ ಆಹಾರ ಶಿಸ್ತಿನ ಬಗ್ಗೆ ಜಾಗೃತಿ ಮೂಡಿಸಲಾಯಿತು.

ಲಯನ್ಸ್ ಸಂಸ್ಥೆಯ ಅಧ್ಯಕ್ಷೆ ತಾರಾಮಣಿ ಮಾತನಾಡಿ, ಕುಟುಂಬದ ಆರೋಗ್ಯವನ್ನು ಕಾಪಾಡುವ ಜವಾಬ್ದಾರಿ ಹೆಚ್ಚಿನ ಮಟ್ಟಿಗೆ ಮಹಿಳೆಯರ ಮೇಲಿದೆ.




ಎಣ್ಣೆಯ ಬಳಕೆಯನ್ನು ನಿಯಂತ್ರಿಸುವ ಮೂಲಕ ಅನೇಕ ಅನಾರೋಗ್ಯಕರ ಸಮಸ್ಯೆಗಳನ್ನು ತಪ್ಪಿಸಬಹುದು. ಎಎಮ್‌ಸಿ ಕುಕ್ ವೇರ್ ತರಹದ ಆಧುನಿಕ, ಆರೋಗ್ಯಪರ ಅಡುಗೆ ಪಾತ್ರೆಗಳು ಕುಟುಂಬದ ಜೀವನ ಶೈಲಿಯನ್ನು ಹೆಚ್ಚಿಸಲು ಅನುಕೂಲಕರ ಆರೋಗ್ಯವಾಗಿರಲು ಸಹಾಯ ಮಾಡುತ್ತದೆ ಎಂದು ಹೇಳಿದರು.

ಕಾವೇರಿ ಕ್ಲಿನಿಕ್‌ನ ವೈದ್ಯಾಧಿಕಾರಿ ಡಾ. ಚಂದ್ರಮೌಳಿ ಮಾತನಾಡಿ, ಇಂದಿನ ಕಾಲದಲ್ಲಿ ಹೆಚ್ಚು ಎಣ್ಣೆ, ಹೆಚ್ಚು ಉಪ್ಪು ಹಾಗೂ ಸಂಸ್ಕರಿತ ಆಹಾರಗಳ ಬಳಕೆ ವೇಗವಾಗಿ ಹೆಚ್ಚುತ್ತಿದೆ. ಇದು ರಕ್ತದೊತ್ತಡ, ಮಧುಮೇಹ, ಹೃದ್ರೋಗ ಮುಂತಾದ ಅನೇಕ ದೀರ್ಘಕಾಲದ ಕಾಯಿಲೆಗಳಿಗೆ ಕಾರಣವಾಗುತ್ತಿದೆ. ತೈಲರಹಿತ ಅಡುಗೆ, ಸಮತೋಲನ ಆಹಾರ ಮತ್ತು ನಿಯಮಿತ ವ್ಯಾಯಾಮವೇ ಉತ್ತಮ ಆರೋಗ್ಯದ ರಹಸ್ಯ ಎಂದು ಆರೋಗ್ಯ ಸಲಹೆ ನೀಡಿದರು.

ಮಹಿಳೆಯರ ಆರೋಗ್ಯ ಕಾಪಾಡಿಕೊಳ್ಳುವುದು ಕುಟುಂಬದ ಸಂಪೂರ್ಣ ಆರೋಗ್ಯವನ್ನು ಕಾಪಾಡುವುದಕ್ಕೆ ಸಮಾನ. ಮಹಿಳೆಯರಿಗೆ ಆರೋಗ್ಯ ಜ್ಞಾನ ನೀಡುವ ಕಾರ್ಯಕ್ರಮಗಳು ಸಮಾಜಕ್ಕೆ ಅತ್ಯಂತ ಅವಶ್ಯ ಎಂದು ತಿಳಿಸಿದರು.

ಕಾರ್ಯದರ್ಶಿ ಆದರ್ಶ್, ಖಜಾಂಚಿ ಸಂತೋಷ್, ಸುರೇಶ್, ಸುಮಂತ್, ಪ್ರಭಾಕರ್, ಅಬ್ದುಲ್ ಲತೀಫ್, ವಿನೋದ ಪ್ರಭಾಕರ್, ಜ್ಯೋತಿ ಸುರೇಶ್, ಶಿಲ್ಪಾ, ಚಂದ್ರಿಕಾ ಸುಮಂತ್, ಪ್ರೀತು ಚಂದ್ರ ಮೌಳಿ, ಫೌಝಿಯಾ ಇನ್ನಿತರರು ಹಾಜರಿದ್ದರು.

# ಅಪಘಾತದಲ್ಲಿ ಸ್ಕೂಟರ್ ಸವಾರ ಸಾವು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಟೆಂಪೋ ಟ್ರಾವೆಲರ್ ಡಿಕ್ಕಿಯಾಗಿ ಸ್ಕೂಟರ್ ಸವಾರ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಮೊಸಳೆ ಗಡಿ ಬಳಿ ನಡೆದಿದೆ. ಎಂ.ಹೊಸಕೊಪ್ಪಲು ನಿವಾಸಿ ಕೃಷ್ಣೇಗೌಡ (60) ಮೃತರು. ಜಮೀನು ಕೆಲಸಕ್ಕಾಗಿ ಸ್ಕೂಟರ್‌ನಲ್ಲಿ ಹೋಗುತ್ತಿದ್ದಾಗ ಹೊಳೆನರಸೀಪುರ ಕಡೆಯಿಂದ ವೇಗವಾಗಿ ಬಂದ ಟೆಂಪೋ ಡಿಕ್ಕಿಯಾಗಿದೆ. ಗಂಭೀರ ಗಾಯಗೊಂಡಿದ್ದ ಕೃಷ್ಣೇಗೌಡ ಅವರನ್ನು ಹಿಮ್ಸ್ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ. ಗೊರೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# 40 ಗ್ರಾಂ ತೂಕದ ಚಿನ್ನಾಭರಣ ಕಳವು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ಮನೆಗೆ ಬೀಗ ಹಾಕದೆ ದೇವಸ್ಥಾನಕ್ಕೆ ತೆರಳಿದ್ದನ್ನೇ ಬಂಡವಾಳ ಮಾಡಿಕೊಂಡ ಕಳ್ಳರು 40 ಗ್ರಾಂ ತೂಕದ ಚಿನ್ನಾಭರಣ ಕದ್ದಿರುವ ಘಟನೆ ನಗರದಲ್ಲಿ ನಡೆದಿದೆ.

ನಗರದ ಲೀಲಾ ಅವರು ಶನಿವಾರ ರಾತ್ರಿ 8.30ರ ಸಮಯದಲ್ಲಿ ಬಾಗಿಲು ಹಾಕಿಕೊಂಡು ಸಮೀಪದ ಶ್ರೀ ಮಲ್ಲಿಗೆಮ್ಮ ದೇವಸ್ಥಾನಕ್ಕೆ ತೆರಳಿದ್ದರು. ರಾತ್ರಿ 10 ಗಂಟೆಗೆ ವಾಪಾಸ್ ಬಂದು ನೋಡಿದಾಗ ಬಾಗಿಲು ತೆರೆದಿರುವುದು ಗೊತ್ತಾಗಿದೆ. ಒಳ ಪ್ರವೇಶಿಸಿ ಬೀರು ಪರಿಶೀಲಿಸಿದಾಗ 35 ಗ್ರಾಂ ತೂಕದ 2 ಚಿನ್ನದ ನೆಕ್ಲೇಸ್, 5 ಗ್ರಾಂ ತೂಕದ ಚಿನ್ನದ ಒಂದು ಉಂಗುರ ಕಳುವಾಗಿರುವುದು ತಿಳಿದುಬಂದಿದೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248